a) **ದೇಹದಾರ್ಢ್ಯತೆ ಪರೀಕ್ಷೆ (Physical Standard Test):**

| | |
|---|---|
| ಎಲ್ಲಾ ಸಾಮಾನ್ಯ ಮತ್ತು<br>* ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 170 ಸೆಂ. ಮೀ.<br>***ಕನಿಷ್ಠ ಎದೆ ಸುತ್ತಳತೆ*** :<br>86 ಸೆಂ. ಮೀ (ಪೂರ್ತಿ ವಿಸ್ತರಿಸಿದಾಗ) ಕನಿಷ್ಟ ವಿಸ್ತರಣೆ 5 ಸೆಂ. ಮೀ. |
| ಮಹಿಳಾ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 158 ಸೆಂ. ಮೀ. ***ಕನಿಷ್ಠ ತೂಕ*** : 45 ಕೆ.ಜಿ. |

| | |
|---|---|
| ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಪುರುಷ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 155 ಸೆಂ. ಮೀ.<br>***ಎದೆ ಸುತ್ತಳತೆ*** : 5 ಸೆಂ.ಮೀ.ಗಳ ಕನಿಷ್ಠ ವಿಸ್ತರಿಸುವುದರೊಂದಿಗೆ ಸಂಪೂರ್ಣವಾಗಿ ಹಿಗ್ಗಿಸಿದಾಗ 75 ಸೆಂ.ಮೀ.ಗಳಿಗಿಂತ ಕಡಿಮೆ ಇಲ್ಲದಂತೆ. |
| ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಮಹಿಳಾ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 150 ಸೆಂ. ಮೀ. ***ಕನಿಷ್ಠ ತೂಕ*** : 45 ಕೆ.ಜಿ |

* ನಿಗದಿಪಡಿಸಿರುವ ಕನಿಷ್ಠ ಎತ್ತರ 170 ಸೆಂ.ಮೀ. ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದೆ ಇರುವ ಪಕ್ಷದಲ್ಲಿ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಸಹ ಅರ್ಹತೆಗೆ ಅನುಗುಣವಾಗಿ ಅಂತಿಮ ಆಯ್ಕೆಗೆ ಪರಿಗಣಿಸಲಾಗುವುದು. ಕಡಿಮೆ ಎತ್ತರ ಹೊಂದಿರುವ ಅಭ್ಯರ್ಥಿಗಳು ಹೆಚ್ಚಿನ ಅಂಕಗಳನ್ನು ಪಡೆದಿದ್ದರೂ ಮೊದಲು ಕನಿಷ್ಠ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಪರಿಗಣಿಸಿದ ನಂತರ ಕಡಿಮೆ ಎತ್ತರ ಹೊಂದಿರುವ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಪರಿಗಣಿಸಲಾಗುವುದು.

b) **ದೈಹಿಕ ಸಹಿಷ್ಣುತೆ ಪರೀಕ್ಷೆ : (Pyisical Endurance Test)**

i) ಮೇಲಿನ ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹರಾದ ಅಭ್ಯರ್ಥಿಗಳು ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು ಹಾಗೂ ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳನ್ನು ಈ ಕೆಳಗೆ ನಮೂದಿಸಿರುವ ಕ್ರಮದಲ್ಲಿಯೇ ಭಾಗವಹಿಸುವುದು ಕಡ್ಡಾಯವಾಗಿರುತ್ತದೆ. ಈ ಪರೀಕ್ಷೆಗಳಲ್ಲಿ ಭಾಗವಹಿಸುವುದನ್ನು ತಿರಸ್ಕರಿಸುವವರು/ ವಿಫಲವಾಗುವವರು ಅನರ್ಹತೆಗೆ ಒಳಗಾಗುವರು. ಪ್ರತಿಯೊಂದು ಸಹಿಷ್ಣುತೆ ಪರೀಕ್ಷೆ ಮುಗಿದ ನಂತರ ನಿಗದಿತ ನಮೂನೆಗೆ ಅಭ್ಯರ್ಥಿಯು ಭರ್ತಿ ಮಾಡಿರುವ ವಿವರಗಳನ್ನು ಪರಿಶೀಲಿಸಿ ಸಹಿ ಹಾಕಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಯು ಅನರ್ಹತೆಗೊಳಗಾಗುವನು. ಸಹಿಷ್ಣುತೆ ಪರೀಕ್ಷೆಗೆ ಅಂಕಗಳನ್ನು ನೀಡಲಾಗುವುದಿಲ್ಲ. ಇವು ಕೇವಲ ಅರ್ಹತೆಗೆ ಮಾತ್ರ ಸೀಮಿತವಾಗಿರುತ್ತದೆ.

ii) **ದೈಹಿಕ ಸಹಿಷ್ಣುತೆ ಪರೀಕ್ಷೆಯಲ್ಲಿರುವ ಅಂಶಗಳು ಹಾಗೂ ಅರ್ಹತಾ ವೇಳೆ/ ದೂರದ ವಿವರಗಳು ಈ ಕೆಳಕಂಡಂತಿರುತ್ತದೆ ಮತ್ತು ಅವುಗಳನ್ನು ನಮೂದಿಸಲಾಗಿರುವ ಕ್ರಮದಲ್ಲಿಯೇ ನಡೆಸಲಾಗುವುದು:**

| ದೈಹಿಕ ಸಹಿಷ್ಣುತೆ ಪರೀಕ್ಷೆ | | |
|---|---|---|
| | **ಅಂಶಗಳು** | **ಅರ್ಹತಾ ವೇಳೆ / ದೂರ** |
| ಎಲ್ಲಾ ಸಾಮಾನ್ಯ ಪುರುಷ ಅಭ್ಯರ್ಥಿಗಳಿಗೆ | 1600 ಮೀಟರ್ ಓಟ | 6 ನಿಮಿಷ 30 ಸೆಕೆಂಡ್ |
| | ಎತ್ತರ ಜಿಗಿತ<br>ಅಥವಾ<br>ಉದ್ದ ಜಿಗಿತ | 1.20 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>ಅಥವಾ<br>3.80 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| | ಗುಂಡು ಎಸೆತ (7.26 ಕೆ.ಜಿ.) | 5.60 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| ಮಹಿಳಾ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ | 400 ಮೀಟರ್ ಓಟ | 1 ನಿಮಿಷ 30 ಸೆಕೆಂಡ್ |
| | ಎತ್ತರ ಜಿಗಿತ<br>ಅಥವಾ<br>ಉದ್ದ ಜಿಗಿತ | 0.90 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>ಅಥವಾ<br>2.50 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| | ಗುಂಡು ಎಸೆತ (4 ಕೆ.ಜಿ.) | 3.75 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |